# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 206 (199) |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 06/07/2023 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೀಡಲಾಗುತ್ತಿರುವ ಪಿಂಚಣಿ ಸೌಲಭ್ಯ ಪಡೆಯಲು ನೋಂದಾಯಿತ ಕಾರ್ಮಿಕರು ಮಂಡಳಿಯಲ್ಲಿ ಕನಿಷ್ಟ ಮೂರು ವರ್ಷಗಳ ಸದಸ್ಯತ್ವದೊಂದಿಗೆ 60 ವರ್ಷ ಪೂರ್ಣಗೊಂಡ ಆರು ತಿಂಗಳೊಳಗೆ ಪಿಂಚಣಿ ಕೋರಿ ನಿಗದಿತ ದಾಖಲಾತಿಗಳೊಂದಿಗೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವುದನ್ನು ಕಡ್ಡಾಯಗೊಳಿಸಿರುವುದರಿಂದ ವಯೋಮಾನ ಮೀರಿರುವ ಹಲವಾರು ಅರ್ಹ ಕಾರ್ಮಿಕರು ಸದರಿ ಸೌಲಭ್ಯದಿಂದ ವಂಚಿತರಾಗಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ಪಿಂಚಣಿ ಸೌಲಭ್ಯವನ್ನು ಪಡೆಯಲು ಕಟ್ಟಡ ಮತ್ತು ಇತರೆ ನಿರ್ಮಾಣ (ಕಾರ್ಮಿಕರ ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮ, 2006ರಲ್ಲಿ ಅರ್ಹ ಫಲಾನುಭವಿಗಳಿಗೆ ನಿಯಮ 49-ಸಿ ರಲ್ಲಿ 06 ತಿಂಗಳ ಕಾಲಾವಾಧಿಯನ್ನು ಅರ್ಜಿ ಸಲ್ಲಿಕೆಗಾಗಿ ನಿಗಧಿಪಡಿಸಲಾಗಿರುತ್ತದೆ.<br>ಫಲಾನುಭವಿಗಳು ಈ ಸೌಲಭ್ಯದಿಂದ ವಂಚಿತರಾಗಬಾರದು ಎನ್ನುವ ಕಾರಣಕ್ಕೆ 06 ತಿಂಗಳ ದೀರ್ಘ ಕಾಲಾವಾಧಿಯನ್ನು ಫಲಾನುಭವಿಗಳಿಗೆ ನೀಡಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ರಾಜ್ಯಾದ್ಯಂತ ಹಲವಾರು ಮಂದಿ 60 ವರ್ಷ ಪೂರ್ಣಗೊಂಡ ಆರು ತಿಂಗಳೊಳಗೆ ಪಿಂಚಣಿ ಕೋರಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಸಾಧ್ಯವಾಗಿರದ ಪ್ರಕರಣಗಳಲ್ಲಿ ಆ ಕಾರ್ಮಿಕರಿಗೆ ನ್ಯಾಯ ಒದಗಿಸಲು ಸರ್ಕಾರ ಏನು ಕ್ರಮಕೈಗೊಂಡಿದೆ; | |
| ಇ) | ರಾಜ್ಯದಲ್ಲಿ ಅರ್ಹ ಫಲಾನುಭವಿಗಳು, 60 ವರ್ಷ ಪೂರ್ಣಗೊಂಡ ಆರು ತಿಂಗಳೊಳಗೆ ಪಿಂಚಣಿ ಕೋರಿ ಅರ್ಜಿ ಸಲ್ಲಿಸಲು ತಿಳಿಯದೇ ನಂತರದ ದಿನಗಳಲ್ಲಿ ಅರ್ಜಿ ಸಲ್ಲಿಸಿರುವ/ ಸಲ್ಲಿಸುವ ಅರ್ಹ ನೊಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಪಿಂಚಣಿ ಸೌಲಭ್ಯ ದೊರೆಯುವಂತೆ ಮಾಡಲು ನಿಯಮಗಳಿಗೆ ಸೂಕ್ತ ತಿದ್ದುಪಡಿಗಳನ್ನು ತರಲಾಗಿದೆಯೇ? | ಇಲ್ಲ |

ಕಾಇ 289 ಎಲ್‌ಇಟಿ 2023

(ಸಂತೋಷ್ ಎಸ್. ಲಾಡ್)
ಕಾರ್ಮಿಕ ಸಚಿವರು